10. ಬೀದರ್ ಜಿಲ್ಲೆಯ ಚೌಕಂಡಿ ಮತ್ತು ಅಸ್ಟೂರು ಟೂಂಬ್ಸ್ ಇಲ್ಲಿ ಪ್ರವಾಸಿ ಮೂಲಭೂತ ಸೌಲಭ್ಯ ಅಭಿವೃದ್ಧಿ.
11. ಯಾದಗಿರಿ ಜಿಲ್ಲೆಯ ಶಹಪುರ ಹತ್ತಿರ ಇರುವ ಸ್ಲೀಪಿಂಗ್ ಬುದ್ಧ ಬೆಟ್ಟದ ಬಳಿ ಪ್ರವಾಸಿ ಮೂಲಭೂತ ಸೌಲಭ್ಯ ಅಭಿವೃದ್ಧಿ.
12. ಬಳ್ಳಾರಿ ಜಿಲ್ಲೆಯ ಹಂಪಿ ಬಳಿ ಇರುವ ದರೋಜಿ ಕರಡಿ ಧಾಮದ ಬಳಿ ಅರಣ್ಯ ವಸತಿ ಮತ್ತು ವಿಹಾರಧಾಮಗಳ ಸಂಸ್ಥೆಯ ವತಿಯಿಂದ ಪರಿಸರ ಪ್ರವಾಸೋದ್ಯಮ ಅಭಿವೃದ್ಧಿ.
13. ಹಾವೇರಿ ಜಿಲ್ಲೆ, ಕಾಗಿನೆಲೆಯಲ್ಲಿ ಪರಿಸರ ಪ್ರವಾಸೋದ್ಯಮ ಅಭಿವೃದ್ಧಿ.
14. ಶಿವಮೊಗ್ಗ ಜಿಲ್ಲೆ ಸಾಗರ ತಾಲ್ಲೂಕು ತಳಕಳಲೆ ಬಳಿ ಪರಿಸರ ಮತ್ತು ಸಾಹಸ ಪ್ರವಾಸೋದ್ಯಮ ಅಭಿವೃದ್ಧಿ.
15. ಬೆಳಗಾವಿ ಜಿಲ್ಲೆ, ಖಾನಪುರ ಅರಣ್ಯ ಪ್ರದೇಶದಲ್ಲಿ ಪರಿಸರ ಮತ್ತು ಸಾಹಸ ಪ್ರವಾಸೋದ್ಯಮ ಅಭಿವೃದ್ಧಿ.
16. ದಕ್ಷಿಣ ಕನ್ನಡ ಜಿಲ್ಲೆ, ಪಿಲಿಕುಳ ನಿಸರ್ಗಧಾಮ ಪ್ರದೇಶದಲ್ಲಿ ಪರಿಸರ ಪ್ರವಾಸೋದ್ಯಮ ರೆಸಾರ್ಟ್ ಅಭಿವೃದ್ಧಿ.

ಗೃಹ ಮಂಡಳಿಯ ಮನೆಗಳು

35 (70) ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ):– ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ಪ್ರಸಕ್ತ ಸಾಲಿನಲ್ಲಿ ಕರ್ನಾಟಕ ಗೃಹ ಮಂಡಳಿಯು ತನ್ನ ಸಂಪನ್ಮೂಲಗಳಿಂದ ಹಾಗೂ ಖಾಸಗಿ ಸಹಭಾಗಿತ್ವದಲ್ಲಿ ಬೀದರ್ ಜಿಲ್ಲೆಯಲ್ಲಿ ವಿಶೇಷವಾಗಿ ಭಾಲ್ಕಿ ಮತ ಕ್ಷೇತ್ರದಲ್ಲಿ ಕೈಗೆಟಕುವ ದರದಲ್ಲಿ ಎಷ್ಟು ಮನೆಗಳನ್ನು ನಿರ್ಮಿಸುವ ಗುರಿಯನ್ನು ಹೊಂದಿದೆ;

ಆ) ಇದಕ್ಕಾಗಿ, ಯಾವ ಯಾವ ಸ್ಥಳನಗಳನ್ನು ಆಯ್ಕೆ ಮಾಡಲಾಗಿದೆ ಹಾಗೂ ಎಷ್ಟು ಭೂಮಿಯನ್ನು ಸ್ವಾಧೀನ ಪಡಿಸಿ ಕೊಳ್ಳಲಾಗಿದೆ; ಈ ಯೋಜನೆಯ ಅನುಷ್ಠಾನಕ್ಕಾಗಿ ಯಾವ ಖಾಸಗಿ ಸಂಸ್ಥೆಗಳು ಗೃಹ ಮಂಡಳಿ ಯೊಂದಿಗೆ ಕೈ ಜೋಡಿಸಲಿವೆ (ಪೂರ್ಣ ವಿವರಗಳನ್ನು ಒದಗಿಸುವುದು);

ಇ) ಈ ಯೋಜನೆಯ ಅನುಷ್ಠಾನಕ್ಕಾಗಿ ರಾಜ್ಯ ಸರ್ಕಾರವು ಪ್ರಸಕ್ತ ಅಯವ್ಯಯದಲ್ಲಿ ಎಷ್ಟು ಹಣವನ್ನು ನಿಗದಿಪಡಿಸಿದೆ?

ಶ್ರೀ ವಿ. ಸೋಮಣ್ಣ (ಮಾನ್ಯ ವಸತಿ ಸಚಿವರು):

ಅ) ಪ್ರಸಕ್ತ ಸಾಲಿನಲ್ಲಿ ಕರ್ನಾಟಕ ಗೃಹ ಮಂಡಳಿಯು ತನ್ನ ಸಂಪನ್ಮೂಲಗಳಿಂದ ಬೀದರ್ ಜಿಲ್ಲೆಯ ಈ ಕೆಳಕಂಡ ಪ್ರದೇಶದಲ್ಲಿ ವಸತಿ ಯೋಜನೆಗಳನ್ನು ಈ ಕೆಳಗಿನಂತೆ ಕೈಗೊಂಡಿದೆ.

ಸ್ಥಳ	ಮನೆ	ನಿವೇಶನ
ಚಿಟ್ಟಾ	48	1661
ಗುನ್ನಳ್ಳಿ	28	714
ಜೌರಾದ	10	332

ಖಾಸಗಿ ಸಹ ಭಾಗಿತ್ವದಲ್ಲಿ ಬೀದರ್ ಜಿಲ್ಲೆಯಲ್ಲಿ ವಿಶೇಷವಾಗಿ ಭಾಲ್ಕಿ ಮತ ಕ್ಷೇತ್ರದಲ್ಲಿ ಪ್ರಸ್ತುತ ಯಾವುದೇ ಮನೆಗಳನ್ನು ನಿರ್ಮಿಸುವ ಪ್ರಸ್ತಾವನೆ ಇರುವುದಿಲ್ಲ.

ಆ) ಬೀದರ್ ಜಿಲ್ಲೆಯಲ್ಲಿ ವಸತಿ ಯೋಜನೆಗಾಗಿ, ಈಗಾಗಲೇ ಚಿಟ್ಟಾ, ಗುನ್ನಳ್ಳಿ ಮತ್ತು ಜೌರಾದ್‌ಗಳಲ್ಲಿ ಕ್ರಮವಾಗಿ 120.20 ಎಕರೆ, 49.39 ಎಕರೆ ಮತ್ತು 20 ಎಕರೆ ಭೂಮಿಯನ್ನು ಕರ್ನಾಟಕ ಗೃಹ ಮಂಡಳಿಯು ಖರೀದಿಸಿದೆ ಅಲ್ಲದೆ, ಈ ಕೆಳಕಂಡಂತೆ ಜಮೀನುಗಳನ್ನು ಖರೀದಿಸಲು/ಭೂಸ್ವಾಧೀನ ಪಡಿಸಿಕೊಳ್ಳಲು ಗುರುತಿಸಲಾಗಿದೆ.

ಕ್ರ ಸಂ.	ಗ್ರಾಮ	ವಿಸ್ತೀರ್ಣ (ಎಕರೆಗಳಲ್ಲಿ)	ಷರಾ
1	ಹುಮ್ನಾಬಾದ್	50.00	ಸದರಿ ಯೋಜನೆಗಳ ಅನುಷ್ಠನಕ್ಕಾಗಿ 225 ವಸತಿ ಯೋಜನೆಯಡಿಯಲ್ಲಿ ಸರ್ಕಾರದಿಂದ ಅನುಮೋಧನೆ ನೀಡಿದ್ದು ಭೂ-ಖರೀದಿ/ಭೂ-ಸ್ವಾಧೀನ ಪ್ರಕ್ರಿಯೆ ಜಾರಿಯಲ್ಲಿರುತ್ತದೆ. ಈ ಯೋಜನೆಗಳ ಅನುಷ್ಠಾನಕ್ಕಾಗಿ ಮಂಡಳಿಯು ಯಾವುದೇ ಖಾಸಗಿ ಸಂಸ್ಥೆಗಳೊಂದಿಗೆ ಕೈ ಜೋಡಿಸಿರುವುದಿಲ್ಲ.
2	ಭಾಲ್ಕಿ	75.00	
3	ಬಸವಕಲ್ಯಾಣ	100.00	
4	ಚಿಟಗುಪ್ಪಾ	25.00	
5	ಬೆಳ್ಳೂರು	114.32	ಜಮೀನನ್ನು ಗುರುತಿಸಿಲಾಗಿದ್ದು ದರ ನಿಗದಿಗೆ ಸಂಬಂಧಿಸಿದಂತೆ ಕ್ರಮ ಕೈಗೊಳ್ಳಲಾಗುತ್ತಿದೆ

ಕರ್ನಾಟಕ ಗೃಹ ಮಂಡಳಿಯ ವಸತಿ ಯೋಜನೆಗಳಿಗೆ ರಾಜ್ಯ ಸರ್ಕಾರದ ಅನುದಾನ ಇರುವುದಿಲ್ಲ. ಮೇಲೆ ಕ್ರಮ ಸಂಖ್ಯೆ (2) ರ (1 ರಿಂದ 4)ರಲ್ಲಿ ತಿಳಿಸಿರುವ ವಸತಿ ಯೋಜನೆಗಳ ಅನುಷ್ಠಾನಕ್ಕಾಗಿ ಕರ್ನಾಟಕ ಗೃಹ ಮಂಡಳಿಯು ರೂ.22,500 ಲಕ್ಷಗಳ ಯೋಜನಾ ಮೊತ್ತವನ್ನು ಅಂದಾಜಿಸಿದೆ.

ರಾಜೀವ್ ಆವಾಸ್ ಯೋಜನೆ

37 (72) ಶ್ರೀ ಈಶ್ವರ ಭೀಮಣ್ಣ ಖಂಡ್ರೆ (ಭಾಲ್ಕಿ): ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ಕೊಳಚೆ ನಿರ್ಮೂಲನೆ ಮಂಡಳಿ ವತಿಯಿಂದ ರಾಜೀವ್ ಆವಾಸ್ ವಸತಿ ಯೋಜನೆಯಡಿಯಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಪ್ರಸಕ್ತ ಸಾಲಿನಲ್ಲಿ ನಿರ್ಮಿಸಲು ಉದ್ದೇಶಿಸಿರುವ ಮನೆಗಳ ಸಂಖ್ಯೆ ಎಷ್ಟು; ಈ ಬಗ್ಗೆ ನಕ್ಷೆ ತಯಾರಿಸುವ ಕೆಲಸ ಯಾವ ಹಂತದಲ್ಲಿದೆ;

ಆ) ಈ ಯೋಜನೆಯ ಅನುಷ್ಠಾನಕ್ಕೆ ತಗಲುವ ಅಂದಾಜು ವೆಚ್ಚವೆಷ್ಟು; ಈ ಪೈಕಿ ಎಷ್ಟು ಮೊತ್ತದ ಹಣ ಕೇಂದ್ರ ಸರ್ಕಾರ ಒದಗಿಸುತ್ತದೆ; ಇದಕ್ಕೆ ರಾಜ್ಯ ಸರ್ಕಾರ ವೆಚ್ಚ ಮಾಡಲಿರುವ ಹಣದ ಮೊತ್ತವೆಷ್ಟು;

ಇ) ಈ ಯೋಜನೆಯಡಿಲ್ಲಿ ಬೀದರ್ ಜಿಲ್ಲೆಯಲ್ಲಿ ವಿಶೇಷವಾಗಿ ಭಾಲ್ಕಿ ಮತಕ್ಷೇತ್ರದಲ್ಲಿ ಪ್ರಸಕ್ತ ಸಾಲಿನಲ್ಲಿ ಎಷ್ಟು ಮನೆಗಳನ್ನು ನಿರ್ಮಿಸುವ ಗುರಿಯನ್ನು ಹೊಂದಲಾಗಿದೆ. (ಪೂರ್ಣ ವಿವರಗಳನ್ನು ಒದಗಿಸುವುದು);

ಶ್ರೀ ಸೋಮಣ್ಣ (ಮಾನ್ಯ ವಸತಿ ಸಚಿವರು):–

ಅ) ಭಾರತ ಸರ್ಕಾರವು ರಾಜೀವ್ ಆವಾಸ್ ಯೋಜನೆಯನ್ನು 2009–10ನೇ ಸಾಲಿನಲ್ಲಿ ಜಾರಿಗೊಳಿಸಿರುತ್ತಾರೆ. ಸದರಿ ಯೋಜನೆಯಡಿ ಮುಂದಿನ 5 ವರ್ಷದೊಳಗಾಗಿ 'ಕೊಳಚೆ ಮುಕ್ತ ಭಾರತ' ನಿರ್ಮಾಣ ಮಾಡುವ ದಿಕ್ಕಿನಲ್ಲಿ ನಗರದ ಬಡ ಜನರ ಹಾಗೂ ಕೊಳಚೆ ಪ್ರದೇಶ ನಿವಾಸಿಗಳ ಅಭಿವೃದ್ಧಿಗಾಗಿ ರಾಜೀವ್ ಆವಾಸ್ ಯೋಜನೆಯನ್ನು ಜಾರಿಗೊಳಿಸಲಾಗಿರುತ್ತದೆ.

ಕೇಂದ್ರ ಸರ್ಕಾರದಿಂದ ರಾಜೀವ್ ಆವಾಸ್ ಯೋಜನೆ ಕುರಿತಂತೆ ವಿವರವಾದ ಮಾರ್ಗದರ್ಶಿಕೆ ರಾಜ್ಯ ಸರ್ಕಾರಗಳಿಗೆ ಬರಬೇಕಿದ್ದು, ತದನಂತರ ಸದರಿ ಯೋಜನೆಯಡಿಯಲ್ಲಿ ನಿರ್ಮಿಸಲು ಉದ್ದೇಶಿಸಿರುವ ಮನೆಗಳ ಸಂಖ್ಯೆಯ ವಿವರವನ್ನು ನೀಡಬಹುದಾಗಿರುತ್ತದೆ.

ಕೊಳಚೆ ಮುಕ್ತ ನಗರ ಯೋಜನೆಯಡಿ ಮೊದಲ ಹಂತದಲ್ಲಿ 10 ನಗರಗಳನ್ನು ಆಯ್ಕೆ ಮಾಡಲಾಗಿರುತ್ತದೆ. ಅವುಗಳೆಂದರೆ ಮೈಸೂರು, ಗುಲ್ಬರ್ಗಾ, ಹುಬ್ಬಳ್ಳಿ–ಧಾರವಾಡ, ಮಂಗಳೂರು, ಬೆಳಗಾವಿ ಬಳ್ಳಾರಿ, ದಾವಣಗೆರೆ, ತುಮಕೂರು ಬೆಂಗಳೂರು ಹಾಗೂ ಶಿವಮೊಗ್ಗ. ಈ ಎಲ್ಲಾ